ಜೆ ಪಿ ಎಂ ಕಾಲೇಜಿನಲ್ಲಿ ಅಕ್ರಮ

356(578); ಶ್ರೀ ಮನೋಹರ್ ಹೆಚ್. ತಹಶೀಲ್ದಾರ್ (ಹಾನಗಲ್)

ಅ) ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು, ಹಲಗೂರು ಜೆ ಪಿ ಎಂ. ಪದವಿಪೂರ್ವ ಕಾಲೇಜಿನ ವೃತ್ತಿ ಶಿಕ್ಷಣ ವಿಭಾಗದ ಸಿಬ್ಬಂದಿಗಳ ಹೆಸರಿನಲ್ಲಿ ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ಹಣ ಡ್ರಾ ಮಾಡಿರುವ ಹಗರಣಗಳಿಗೆ ಸಂಬಂಧಿಸಿದಂತೆ ಈ ಕಾಲೇಜಿನ ಸದಸ್ಯರು ದಿನಾಂಕ: 22–02–2013ರಂದು ನೀಡಿರುವ ದೂರಿನ ಮೇರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು?

ಆ) ಈ ರೀತಿ ಅಕ್ರಮಗಳನ್ನು ಮಾಡಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ, ಯಾರ ಯಾರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು, ಹಲಗೂರು ಜೆ.ಪಿ ಎಂ ಪದವಿಪೂರ್ವ ಕಾಲೇಜು, ಇದು ಪದವಿಪೂರ್ವ ಶಿಕ್ಷಣ ಇಲಾಖೆ ವ್ಯಾಪ್ತಿಗೆ ಒಳಪಡುವುದರಿಂದ ಸದರಿ ಕಾಲೇಜಿನ ಪ್ರಾಂಶುಪಾಲರ ವಿರುದ್ಧ ಕಾನೂನು ಕ್ರಮ ಜರುಗಿಸಲು ಕಾಲೇಜಿನ ಸದಸ್ಯರು ನೀಡಿರುವ ದೂರಿನ ಪ್ರತಿಯನ್ನು ವೃತ್ತಿ ಶಿಕ್ಷಣ ನಿರ್ದೇಶನಾಲಯದಿಂದ ದಿನಾಂಕ 18–03–2013 ರಂದು ಪದವಿಪೂರ್ವ ಶಿಕ್ಷಣ ಇಲಾಖೆಗೆ ಕಳುಹಿಸಲಾಗಿದೆ

ಆ) ಜೆ ಪಿಎಂ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಂ ದೇವೇಗೌಡ. ಇವರು ನಕಲಿ ದಾಖಲೆಗಳನ್ನು ಸೃಷ್ಟಿಸಿ ₹ 1 36,484/–ಗಳನ್ನು ನಿಯಮ ಬಾಹಿರವಾಗಿ ಡ್ರಾ ಮಾಡಿಕೊಂಡಿರುವ ಹಣವನ್ನು ಸರ್ಕಾರಕ್ಕೆ ಜಮೆ ಮಾಡಿರುತ್ತಾರೆ. ಮುಂದುವರೆದು ಸದರಿ ಪ್ರಾಂಶುಪಾಲರನ್ನು ಸೇವೆಯಿಂದ ಅಮಾನತ್ತುಗೊಳಿಸುವಂತೆ ಸದರಿ ಕಾಲೇಜಿನ ಆಡಳಿತ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಪದವಿಪೂರ್ವ ಶಿಕ್ಷಣ ಇಲಾಖೆಯು ಅನುಮೋದಿಸಿದೆ.